ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಸರಕು ಸಾಗಾಣಿಕೆ ವಾಹನ ಅಥವಾ ಸಾರಿಗೆ ವಾಹನ ಖರೀದಿಸಲು ಅನುಮತಿ ನೀಡುವ ಕುರಿತು.

ಉಲ್ಲೇಖ: ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ: ಡಾ.ಬಿ.ಆರ್ ಅಂಅನಿ/ಕ್ಷೇ-ತ/ಸಾಕ/2023-24, ದಿನಾಂಕ:10-08-2023.

******

<u>ಪ್ರಸ್ತಾವನೆ:-</u>

ಮೇಲೆ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪತ್ರದಲ್ಲಿ ದಿನಾಂಕ:20.05.2022ರಂದು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಅನುಸೂಚಿತ ಜಾತಿಗಳು ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದಿಸಿದಂತೆ ಹಾಗೂ 2021-22 ಮತ್ತು 2022-23ನೇ ಸಾಲಿನ SCSP & TSP ಕ್ರಿಯಾ ಯೋಜನೆಯಲ್ಲಿ ಅನುಮೋದಿಸಿರುವಂತೆ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯಡಿ ಸರಕು ಸಾಗಾಣಿಕೆ ವಾಹನಗಳಿಗೆ ಶೇ.70% ರಷ್ಟು ಅಥವ ಗರಿಷ್ಟ ರೂ.3.50ಲಕ್ಷ ಸಹಾಯಧನ ಉಳಿದಂತೆ ಬ್ಯಾಂಕ್ ಸಾಲವಾಗಿ ಸೌಲಭ್ಯ ಪಡೆಯಲು ಅನುಮೋದಿಸಿರುವಂತೆ ನಿಗಮಗಳಿಂದ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ:ಸಕಇ 96 STP 2023, ದಿನಾಂಕ:01.07.2023ರಲ್ಲಿ ಕರ್ನಾಟಕ ಮಹರ್ಷಿ ಪರಿಶಿಷ್ಟ ಪಂಗಡಗಳ ಅಭಿವೃಧ್ಧಿ ನಿಗಮದಿಂದ ಉದ್ಯಮ ಶೀಲತಾ ಯೋಜನೆಯಡಿ ಫಲಾನುಭವಿಗಳು ಇಚ್ಛಿಸುವಂತಹ ಸರಕು ಸಾಗಾಣಿಕೆಗೆ ವಾಹನ ಅಥವಾ ಸಾರಿಗೆ ವಾಹನ (ಹಳದಿ ಫಲಕ) ಖರೀದಿಸಲು ಅನುಮೋದನೆ ನೀಡಲಾಗಿರುತ್ತದೆ. ಈ ಆದೇಶದಂತೆ ಮನವಿಗಳು ಸ್ವೀಕೃತವಾದ ಹಿನ್ನಲೆಯಲ್ಲಿ ಕರ್ನಾಟಕ ಮಹರ್ಷಿ ಪರಿಶಿಷ್ಟ ಪಂಗಡಗಳ ಅಭಿವೃಧ್ಧಿ ನಿಗಮಕ್ಕೆ ಹೊರಡಿಸಿರುವ ಆದೇಶದಂತೆ ಸಮಾಜ ಕಲ್ಯಾಣ ಇಲಾಖೆಯ ಅಧೀನದ ಅಭಿವೃದ್ಧಿ ನಿಗಮಗಳಿಗೂ ಅನ್ವಯಿಸುವಂತೆ ಸರ್ಕಾರ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

S.V
14/09/2023

...2

Scanned with OKEN Scanner

ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆ ಹಾಗೂ ಲಭ್ಯ ಇರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 123 ಎಸ್‌ಡಿಸಿ 2023,**
**ಬೆಂಗಳೂರು, ದಿನಾಂಕ:14.09.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿನ ನಿಗಮಗಳ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಉದ್ಯಮಶೀಲತಾ ಯೋಜನೆಯಡಿಯಲ್ಲಿ ಶೇ 70% ರಷ್ಟು ಅಥವಾ ಗರಿಷ್ಠ 3.50 ಲಕ್ಷ ಸಹಾಯಧನ, ಉಳಿದಂತೆ ಬ್ಯಾಂಕ್ ಸಾಲವಾಗಿ ಸರಕು ಸಾಗಾಣಿಕೆ ವಾಹನ ಅಥವಾ ಸಾರಿಗೆ ವಾಹನ (ಹಳದಿ ಫಲಕ) ಖರೀದಿಸಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕಲಾವತಿ ಎಸ್.ವಿ)
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು,ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ.
9. ಎಲ್ಲಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು (ಆಯಾ ನಿಗಮದ ಮೂಲಕ)
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

Scanned with OKEN Scanner